# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 564(592) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ನಸೀರ್ ಅಹಮದ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 20.02.2023 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಆಯುಷ್ ಇಲಾಖೆಯಲ್ಲಿ ರಾಜ್ಯ ಸರ್ಕಾರದ ಅಧೀನದಲ್ಲಿ ಖಾಯಂ ಕರ್ತವ್ಯ ನಿರ್ವಹಿಸುತ್ತಿರುವ ತಜ್ಞ ವೈದ್ಯರುಗಳೆಷ್ಟು; ಅವರುಗಳು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳಗಳ ಸಂಪೂರ್ಣ ಮಾಹಿತಿ ಮತ್ತು ಎಷ್ಟು ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ; (ವಿವರ ನೀಡುವುದು) | ಕೇಂದ್ರ ಪುರಸ್ಕೃತ ಯೋಜನೆಯಾದ ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ 131 ಆಯುಷ್ ತಜ್ಞ ವೈದ್ಯರುಗಳು ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.<br>ಸದರಿ ತಜ್ಞ ವೈದ್ಯರುಗಳು 2014-15ನೇ ಸಾಲಿನಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ. ತಜ್ಞ ವೈದ್ಯರುಗಳು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳಗಳ ಸಂಪೂರ್ಣ ಮಾಹಿತಿಯನ್ನು **ಅನುಬಂಧ-1**ರಲ್ಲಿ ಒದಗಿಸಲಾಗಿದೆ. |
| ಆ) | ರಾಜ್ಯ ಸರ್ಕಾರದಿಂದ ಕಳೆದ 20 ವರ್ಷಗಳಲ್ಲಿ ಸೃಜನೆಗೊಂಡಿರುವ ತಜ್ಞ ವೈದ್ಯರ ಒಟ್ಟು ಸಂಖ್ಯೆ ಮತ್ತು ನೇಮಕಾತಿಯಾಗಿರುವ ಸಂಖ್ಯೆ ಎಷ್ಟು; (ವಿವರ ನೀಡುವುದು) | ಕೇಂದ್ರ ಪುರಸ್ಕೃತ ಯೋಜನೆಯಾದ ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ ಒಟ್ಟು 160 ತಜ್ಞ ವೈದ್ಯರ ಸೇವೆಯನ್ನು ಗುತ್ತಿಗೆ ಆಧಾರದ ಮೇಲೆ ಪಡೆಯಲು ಭಾರತ ಸರ್ಕಾರದಿಂದ ಅನುಮೋದನೆಯಾಗಿರುತ್ತದೆ.<br>ಆ ಪೈಕಿ 131 ಆಯುಷ್ ತಜ್ಞ ವೈದ್ಯರುಗಳು ಗುತ್ತಿಗೆ ಆಧಾರದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ವಿವರವನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ. |
| ಇ) | ಖಾಯಂ ತಜ್ಞ ವೈದ್ಯರ ಅಭ್ಯರ್ಥಿಗಳಿಲ್ಲದೇ ಗುತ್ತಿಗೆ ತಜ್ಞ ವೈದ್ಯರನ್ನು ನೇಮಕ ಮಾಡಬಹುದೇ ಇದ್ದರೂ ಜವಾಬ್ದಾರಿಗಳ ಮಾಹಿತಿ ನೀಡುವುದು ಹಾಗೂ ಇವರ ಮೇಲುಸ್ತುವಾರಿ ನೋಡಿಕೊಳ್ಳುವವರು ಯಾರು; (ಮಾಹಿತಿ ನೀಡುವುದು) | ಕೇಂದ್ರ ಪುರಸ್ಕೃತ ಯೋಜನೆಯಾದ ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ ಒಟ್ಟು 160 ತಜ್ಞ ವೈದ್ಯರ ಸೇವೆಯನ್ನು ಗುತ್ತಿಗೆ ಆಧಾರದ ಮೇಲೆ ಪಡೆಯಲು ಭಾರತ ಸರ್ಕಾರದಿಂದ ಅನುಮೋದನೆಯಾಗಿರುತ್ತದೆ.<br>ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ ಸುತ್ತೋಲೆ ಸಂಖ್ಯೆ: ಆಯುಷ್/07/ಐಇಸಿ (3) 2015-16, ದಿನಾಂಕ: 21.08.2019 ರಲ್ಲಿನ ಮಾರ್ಗಸೂಚಿಗಳನ್ವಯ, ಜಿಲ್ಲಾ ಆಯುಷ್ ಅಧಿಕಾರಿಗಳ ಕೋರಿಕೆ ಮೇರೆಗೆ ಜಿಲ್ಲಾ/ಉಪ ಜಿಲ್ಲಾಮಟ್ಟದ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಿ, ಸದರಿ ಆಸ್ಪತ್ರೆಗಳಿಗೆ ಗುತ್ತಿಗೆ ಆಧಾರದ ಮೇಲೆ ತಜ್ಞ ವೈದ್ಯರನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ ನೇಮಕಾತಿ ಮಾಡಿಕೊಳ್ಳಲಾಗುತ್ತದೆ. |

| | | |
|---|---|---|
| | | ಇದರ ಮೇಲುಸ್ತುವಾರಿಯನ್ನು ಜಿಲ್ಲಾ ಆಯುಷ್ ಅಧಿಕಾರಿಗಳು ನೋಡಿಕೊಳ್ಳುವರು.<br><br>**ಜವಾಬ್ದಾರಿಗಳು:**<br><br>• ಆಸ್ಪತ್ರೆ/ಚಿಕಿತ್ಸಾಲಯಗಳಿಗೆ ಬರುವ ಒಳ ಹಾಗೂ ಹೊರ ರೋಗಿಗಳಿಗೆ ಸೂಕ್ತ ಚಿಕಿತ್ಸೆ ಒದಗಿಸುವುದು ಹಾಗೂ ಉಚಿತ ಔಷಧಿ ವಿತರಣೆ.<br><br>• ಮೇಲಾಧಿಕಾರಿಗಳಿಂದ ಸೂಚಿಸಲ್ಪಡುವ ಇತರೆ ಕರ್ತವ್ಯಗಳನ್ನು ನಿರ್ವಹಿಸುವುದು |
| ಈ) | ಗುತ್ತಿಗೆ ತಜ್ಞ ವೈದ್ಯರುಗಳಿಂದ ಆರೋಗ್ಯ ಸೇವೆಯಲ್ಲಿ ಸಾರ್ವಜನಿಕರಿಗೆ ತೊಂದರೆಗಳುಂಟಾದಲ್ಲಿ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು? | ಗುತ್ತಿಗೆ ತಜ್ಞ ವೈದ್ಯರುಗಳಿಂದ ಆರೋಗ್ಯ ಸೇವೆಯಲ್ಲಿ ಸಾರ್ವಜನಿಕರಿಗೆ ತೊಂದರೆ ಉಂಟಾದಲ್ಲಿ ಸಂಬಂಧಿಸಿದ ತಜ್ಞ ವೈದ್ಯರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು. |

**ಸಂಖ್ಯೆ: ಆಕುಕ 34 ಪಿಟಿಡಿ 2023**

**(ಡಾ|| ಕೆ.ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು